**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.05.2026 / 18.40 hrs**

---

ಮುಖ್ಯಾಂಶಗಳು

೧. ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಹಾರ ಕೂಟ - ಶಾಸಕಾಂಗ ಪಕ್ಷದ ಸಭೆ ಕರೆದಿಲ್ಲ ; ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸ್ಪಷ್ಟನೆ

೨. ಸರ್ಕಾರದ ಮೂರು ವರ್ಷದ ಸಾಧನೆಗಳ ಶ್ರೇಯ ಪ್ರತಿಯೊಬ್ಬ ಕನ್ನಡಿಗರಿಗೆ ಅರ್ಪಣೆ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವಿಭಜನೆ ಪ್ರಸ್ತಾವನೆಗೆ ಷರತ್ತುಗಳೊಂದಿಗೆ ರಾಜ್ಯಪಾಲರಿಂದ ಅನುಮೋದನೆ

೪. ಕರ್ನಾಟಕದೊಂದಿಗೆ ತಂತ್ರಜ್ಞಾನ ಹಂಚಿಕೊಳ್ಳಲು ಸಿದ್ಧ ; ಎಐ, ಡಿಜಿಟಲ್ ವಾಟರ್ ಶೃಂಗಸಭೆಯಲ್ಲಿ ಇಸ್ರೇಲ್ ಘೋಷಣೆ

೫. ಜೂನ್ ೪ ರಿಂದ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದಲ್ಲಿ ದಕ್ಷಿಣ-ಆಫ್ರಿಕಾದ ಚೀತಾಗಳು ಸಾರ್ವಜನಿಕ ವೀಕ್ಷಣೆಗೆ ಲಭ್ಯ

---

ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ವದಂತಿಗಳ ನಡುವೆ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಉಪಹಾರ ಕೂಟ ನಡೆಸಲಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಎಲ್ಲದಕ್ಕೂ ನಾಳೆ ಉತ್ತರ ನೀಡುವುದಾಗಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಕಾಂಗ್ರೆಸ್ ಶಾಸಕಾಂಗ ಪಕ್ಷದ ಯಾವುದೇ ಸಭೆಯನ್ನು ಕರೆಯಲಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪಕ್ಷದ ಪರವಾಗಿ ರಾಜ್ಯದ ಜನರ ಹಿತದೃಷ್ಟಿಯಿಂದ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ರಾಜ್ಯಸಭಾ ಮತ್ತು ಪರಿಷತ್ ಚುನಾವಣೆ ಕುರಿತು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಜೊತೆ ವಿಸ್ತೃತ ಚರ್ಚೆ ನಡೆಸಲಾಗಿದ್ದು, ವಿವಿಧ ಹೆಸರುಗಳನ್ನು ಸೂಚಿಸಲಾಗಿದೆ. ಸೂಕ್ತ ಅಭ್ಯರ್ಥಿಗಳ ಹೆಸರನ್ನು ಶೀಘ್ರವೇ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ.

---

ನಾಯಕತ್ವ ಬದಲಾವಣೆ ಕುರಿತ ಎಲ್ಲಾ ಊಹಾಪೋಹಗಳಿಗೆ ನಾಳೆ ತೆರೆ ಎಳೆಯಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಹಾಗೂ ವರಿಷ್ಠರ ಜೊತೆಗಿನ ಸಭೆಯಲ್ಲಿ ಯಾವ ನಿರ್ದೇಶನ ನೀಡಲಾಗಿದೆ ಎಂಬುದು ನಮಗೆ ತಿಳಿದಿಲ್ಲ ಎಂದು ಹೇಳಿದ್ದಾರೆ. ವರಿಷ್ಠರು ನೀಡುವ ಜವಾಬ್ದಾರಿಗಳನ್ನು ಎಲ್ಲರೂ ಒಪ್ಪಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಇದೇ ವೇಳೆ ಕೆಪಿಸಿಸಿ ಅಧ್ಯಕ್ಷರ ಹುದ್ದೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಈ ಜವಾಬ್ದಾರಿಯನ್ನು ತೆಗೆದುಕೊಳ್ಳಲು ಸಿದ್ಧವಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

ಇನ್ನೊಂದೆಡೆ ಶಿವಮೊಗ್ಗದಲ್ಲಿ ಪ್ರತಿಕ್ರಿಯಿಸಿರುವ ಸಚಿವ ಮಧುಬಂಗಾರಪ್ಪ, ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ಹೇಳಿದ್ದಾರೆ.

---

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ವಿಚಾರ ನನಗೆ ತಿಳಿದಿಲ್ಲ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಭಯ ನಾಯಕರು ಸರ್ಕಾರ, ಪಕ್ಷ ಹಾಗೂ ರಾಜ್ಯಕ್ಕೆ ಎರಡೂ ಕಣ್ಣುಗಳಿದ್ದಂತೆ ಎಂದು ಹೇಳಿದ್ದಾರೆ. ಪಕ್ಷದ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರುವುದಾಗಿ ತಿಳಿಸಿದ್ದಾರೆ.

---

ರಾಜ್ಯದ ಜನರ ಆಶೀರ್ವಾದದೊಂದಿಗೆ ಅಧಿಕಾರಕ್ಕೆ ಬಂದು ಮೂರು ವರ್ಷಗಳು ಪೂರೈಸಿರುವ ಈ ಸಾರ್ಥಕ ಸಂದರ್ಭದಲ್ಲಿ ಸರ್ಕಾರದ ಎಲ್ಲಾ ಸಾಧನೆಗಳ ಶ್ರೇಯಸ್ಸನ್ನು ಪ್ರತಿಯೊಬ್ಬ ಕನ್ನಡಿಗನಿಗೂ ಅರ್ಪಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಚುನಾವಣಾ ಪೂರ್ವದಲ್ಲಿ ರಾಜ್ಯದ ಜನತೆಗೆ ನೀಡಿದ ಪ್ರತಿ ಮಾತಿಗೂ ಬದ್ಧರಾಗಿ ನಡೆಯುವ ಮೂಲಕ ನುಡಿದಂತೆ ನಡೆದ ಹೆಮ್ಮೆ ನಮಗಿದೆ. ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ಪ್ರತಿ ಮನೆಗೂ ತಲುಪಿಸುವಲ್ಲಿ ಯಶಸ್ವಿಯಾಗಿದ್ದೇವೆ ಎಂದು ತಿಳಿಸಿದ್ದಾರೆ.

ಯಾರೂ ಹಸಿವಿನಿಂದ ಮಲಗಬಾರದು ಎಂಬ ಸಂಕಲ್ಪದೊಂದಿಗೆ ಜಾರಿಗೊಂಡ ಅನ್ನಭಾಗ್ಯ ಯೋಜನೆಯು ಕೋಟ್ಯಂತರ ಕುಟುಂಬಗಳಿಗೆ ಪೌಷ್ಠಿಕ ಆಹಾರದ ಭದ್ರತೆ ನೀಡುವ ಮೂಲಕ ಆರೋಗ್ಯವಂತ ಸಮಾಜಕ್ಕೆ ಆಧಾರವಾಗಿದೆ.

ಅನ್ನಭಾಗ್ಯ ಯೋಜನೆಯಡಿ ಉಚಿತ ಆಹಾರಧಾನ್ಯ ವಿತರಿಸಲು ಈವರೆಗೆ ೧೮ ಸಾವಿರದ ೮೯೭ ಕೋಟಿ ರೂಪಾಯಿ ವ್ಯಯಿಸಲಾಗಿದ್ದು, ೪.೨೭ ಕೋಟಿ ಪಡಿತರದಾರರು ಮೂರು ಹೊತ್ತು ನೆಮ್ಮದಿಯಿಂದ ಊಟ ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

---

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವಿಭಜಿಸಿ ಧಾರವಾಡಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆ ಮಾಡುವ ಪ್ರಸ್ತಾವನೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕೆಲವು ಷರತ್ತುಗಳೊಂದಿಗೆ ಅನುಮೋದನೆ ನೀಡಿ, ಮುಂದಿನ ಪ್ರಕ್ರಿಯೆಗಾಗಿ ಸರ್ಕಾರಕ್ಕೆ ಕಡತ ಕಳುಹಿಸಿದ್ದಾರೆ.

ಪ್ರತ್ಯೇಕ ಪಾಲಿಕೆ ಪ್ರಸ್ತಾವನೆ ಇತ್ಯರ್ಥಗೊಳಿಸಲು ಸರ್ಕಾರವು ಕೆಲ ನಿಬಂಧನೆ ಪಾಲಿಸಬೇಕು ಎಂದು ರಾಜ್ಯಪಾಲರು ಸರ್ಕಾರಕ್ಕೆ ಕಳುಹಿಸಿರುವ ಅನುಮೋ ದನೆಯಲ್ಲಿ ಷರತ್ತು ವಿಧಿಸಿದ್ದಾರೆ.

ಅಸ್ತಿತ್ವದಲ್ಲಿರುವ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಚುನಾಯಿತ ಸಂಸ್ಥೆಯ ಅವಧಿ ಪೂರ್ಣಗೊಂಡ ನಂತರ ವಿಭಜನೆಯ ಅಧಿಸೂಚನೆಯು ಜಾರಿಗೊಳ್ಳಬೇಕು. ಸದ್ಯ ನಡೆಯುತ್ತಿರುವ ಜನಗಣತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೂ ಈಗ ಹುಬ್ಬಳ್ಳಿ-ಧಾರವಾಡದಲ್ಲಿ ಅಸ್ತಿತ್ವದಲ್ಲಿ ಇರುವ ಗಡಿಗಳನ್ನು ಬದಲಾಯಿಸದಂತೆ ಷರತ್ತು ವಿಧಿಸಲಾಗಿದೆ.

ಆದರೆ ಹುಬ್ಬಳ್ಳಿ ಹಾಗೂ ಧಾರವಾಡ ಮಹಾನಗರ ಪಾಲಿಕೆಗಳಿಗೆ ಆರ್ಥಿಕ ನೆರವು ಹಾಗೂ ಆದಾಯ ವಿತರಣೆ ಲಭ್ಯವಾಗುವಂತೆ ಅಗತ್ಯ ಕ್ರಮಕೈಗೊಳ್ಳಲು ರಾಜ್ಯಪಾಲರು ಸಲಹೆ ನೀಡುವ ಕಡತ ಸರ್ಕಾರಕ್ಕೆ ಹಿಂದಿರುಗಿಸಿದ್ದಾರೆ.

---

ಕರ್ನಾಟಕದೊಂದಿಗೆ ತಂತ್ರಜ್ಞಾನ ಹಂಚಿಕೊಳ್ಳಲು ಇಸ್ರೇಲ್ ಸಿದ್ಧವಾಗಿದೆ ಎಂದು ಇಸ್ರೇಲ್ ಕಾನ್ಸುಲ್ ಜನರಲ್ ಓರ್ಲಿ ವೈಟ್ಜ್‌ಮ್ಯಾನ್ ಘೋಷಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ರಾಷ್ಟ್ರೀಯ ಕೃತಕ ಬುದ್ಧಿಮತ್ತೆ, ಡಿಜಿಟಲ್ ವಾಟರ್ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಇಸ್ರೇಲ್ ಒಂದು ಕಾಲದಲ್ಲಿ ತೀವ್ರ ಜಲಕ್ಷಾಮ ಎದುರಿಸುತ್ತಿದ್ದು, ನಿರಂತರ

ತಾಂತ್ರಿಕ ನಾವೀನ್ಯತೆ ಸರ್ಕಾರದ ದಿಟ್ಟ ನೀತಿಗಳಿಂದ ಆ ದೊಡ್ಡ ಸವಾಲನ್ನು ಅವಕಾಶವಾಗಿ ಬದಲಾಯಿಸಿದೆವು ಎಂದು ತಿಳಿಸಿದ್ದಾರೆ.

ಇದೇ ವೇಳೆ ಮಾತನಾಡಿದ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಯಾವುದೇ ಒಂದು ನಾವೀನ್ಯತಾ ಪರಿಸರ ವ್ಯವಸ್ಥೆಯು ಅಭಿವೃದ್ಧಿ ಹೊಂದಬೇಕಾದರೆ ಅಲ್ಲಿ ಎಲ್ಲಾ ವಲಯಗಳ ಪರಸ್ಪರ ಸಹಕಾರ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

ಕುಡಿಯುವ ನೀರು ಪೂರೈಕೆ ಹಾಗೂ ನಿರ್ವಹಣೆಯಂತಹ ಅತ್ಯಂತ ಸೂಕ್ಷ್ಮ ವಲಯದಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆ ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ.

---

ದಕ್ಷಿಣ ಆಫ್ರಿಕಾದಿಂದ ಬೆಂಗಳೂರಿಗೆ ಆಗಮಿಸಿದ ನಾಲ್ಕು ಚೀತಾಗಳ ಕ್ವಾರಂಟೈನ್ ಅವಧಿ ಮುಗಿದಿದ್ದು, ಜೂನ್ ೪ರಿಂದ ಸಾರ್ವಜನಿಕ ವೀಕ್ಷಣೆಗೆ ಲಭ್ಯವಾಗಲಿದೆ ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ.ಖಂಡ್ರೆ ತಿಳಿಸಿದ್ದಾರೆ.

ಪ್ರಧಾನ ಮುಖ್ಯ ಅರಣ್ಯಾಧಿಕಾರಿ ಕುಮಾರ್ ಪುಷ್ಕರ್ ಅವರೊಂದಿಗೆ ಸಭೆ ನಡೆಸಿದ ಬಳಿಕ, ಮಾತನಾಡಿದ ಸಚಿವರು, ಈ ಚೀತಾಗಳಿಗಾಗಿಯೇ ಬನ್ನೇರುಘಟ್ಟ ಮೃಗಾಲಯದಲ್ಲಿ ಪ್ರತ್ಯೇಕವಾಗಿ ಸಿದ್ಧಪಡಿಸಿರುವ ಆವರಣದಲ್ಲಿ ಬಿಡಲಾಗುವುದು ಎಂದು ತಿಳಿಸಿದ್ದಾರೆ.

ಈ ಚೀತಾಗಳನ್ನು ಬನ್ನೇರುಘಟ್ಟ  ಪರಿಸರ, ವಾತಾವರಣ ಹವಾಮಾನಕ್ಕೆ ಹೊಂದಿಕೊಳ್ಳಲು ಪ್ರತ್ಯೇಕವಾಗಿ ಇಡಲಾಗಿತ್ತು. ಪ್ರಸ್ತುತ ಇವುಗಳು ಸಂಪೂರ್ಣ ಆರೋಗ್ಯವಾಗಿದ್ದು, ಜೂನ್ ಮೊದಲ ವಾರದಲ್ಲಿ ಪ್ರವಾಸಿಗರಿಗೆ ನೋಡಲು ಅವಕಾಶ ಕಲ್ಪಿಸುವಂತೆ ಸಚಿವರು ನಿರ್ದೇಶನ ನೀಡಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಸರ್ಕಾರ ೧೨ ವರ್ಷಗಳನ್ನು ಪೂರೈಸಿದೆ. ಈ ಕುರಿತಂತೆ ಜವಹಾರ್‌ಲಾಲ್ ನೆಹರು ತಾರಾಲಯದ ನಿರ್ದೇಶಕರಾದ ಡಾ.ಬಿ.ಆರ್.ಗುರುಪ್ರಸಾದ್ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದು, ಕೇಂದ್ರ ಸರ್ಕಾರದ ಪ್ರೋತ್ಸಾಹದಿಂದ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ಕಳೆದ ೧೦ ವರ್ಷಗಳಲ್ಲಿ ಅತ್ಯುತ್ತಮ ಸಾಧನೆಗಳಾಗಿವೆ ಎಂದು ತಿಳಿಸಿದ್ದಾರೆ.

ಅಂತರಿಕ್ಷ, ರಕ್ಷಣೆ, ಅರೆವಾಹಕ, ಕೈಗಾರಿಕೆಗಳಿಗೆ ಪ್ರೋತ್ಸಾಹ ಸಿಕ್ಕಿದ್ದು, ಸಂಶೋಧನೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಧನ ಸಂಪನ್ಮೂಲವು ದೊರೆತಿದೆ ಎಂದು ಹೇಳಿದ್ದಾರೆ.

ಧ್ವನಿ: ಗುರುಪ್ರಸಾದ್

---

ಆಕಾಶವಾಣಿಗೆ ಈಗ ೯೦ರ ಸಂಭ್ರಮ. ಈ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ಇದೇ ತಿಂಗಳ ೩೦ರಂದು ಬೆಂಗಳೂರಿನ ಗಾಯನ ಸಮಾಜದಲ್ಲಿ ಸಂಜೆ ೬ ಗಂಟೆಗೆ ಸಂಗೀತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮೊದಲ ಗೋಷ್ಠಿಯಲ್ಲಿ ಆಕಾಶವಾಣಿ ಸಾಹಿತ್ಯ ಕುರಿತು ಹಿರಿಯ ಸಾಹಿತಿ ಬಸವರಾಜ ಸಾದರ, ಆಕಾಶವಾಣಿ ಸಂಗೀತ ಕುರಿತು ಸಂಗೀತ ತಜ್ಞ ಡಾ.ಎನ್.ರಘು, ಆಕಾಶವಾಣಿ ನಾಟಕಗಳ ಕುರಿತು ಡಾ.ವಿದ್ಯಾ ಮಾತನಾಡಲಿದ್ದಾರೆ.

ಬಳಿಕ, ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ನಡೆಯಲಿದ್ದು, ಹೆಸರಾಂತ ಕಲಾವಿದ ರಮಣಬಾಲಚಂದ್ರನ್ ಅವರಿಂದ್ ವೀಣಾ ವಾದನ ನಡೆಯಲಿದೆ. ಕಾರ್ಯಕ್ರಮದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಅಯೇಶಾ ಖಾನಂ, ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

---

ಹೆಚ್ಚುವರಿ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳನ್ನು ಬಳಸಿಕೊಂಡು ವಿಂಡ್ ಟನಲ್ ಕೆಳಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನ ಯು.ಆರ್.ರಾವ್ ಉಪಗ್ರಹ ಕೇಂದ್ರದ ಬಳಿ ಇರುವ ವಿಂಡ್ ಟನಲ್ ಜಂಕ್ಷನ್‌ಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಮಾತನಾಡಿದ ಅವರು, ಕಾಮಗಾರಿಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಹೆಚ್ಚುವರಿ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳನ್ನು ಬಳಸಿಕೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

೧೯ ಕೋಟಿ ರೂಪಾಯಿ ವೆಚ್ಚದಲ್ಲಿ ೩೦೦ ಮೀಟರ್ ಉದ್ದದ ಕೆಳಸೇತುವೆ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಶೇಕಡ ೭೦ರಷ್ಟು ಕಾಮಗಾರಿ ಪೂರ್ಣಗೊಂಡಿದೆ ಎಂದು ತಿಳಿಸಿದ್ದಾರೆ.

---

ಮೇಕೆದಾಟು ಯೋಜನೆಗೆ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ವಿರೋಧ ವ್ಯಕ್ತಪಡಿಸಿರುವುದನ್ನು ಖಂಡಿಸಿ ಕನ್ನಡಪರ ಸಂಘಟನೆಗಳ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು.

ರಾಷ್ಟ್ರೀಯ ಹೆದ್ದಾರಿ ತಡೆದ ಪ್ರತಿಭಟನಾಕಾರರು ತಮಿಳುನಾಡು ಸರ್ಕಾರ, ಮುಖ್ಯಮಂತ್ರಿ ವಿಜಯ್  ವಿರುದ್ಧ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು.

ಮೇಕೆದಾಟು ಯೋಜನೆ ಅನುಷ್ಠಾನ ಆಗಲೇಬೇಕು ಎಂದು ಕನ್ನಡಪರ ಹೋರಾಟಗಾರರು ಆಗ್ರಹಿಸಿದ್ದಾರೆ.

---

ದಾವಣಗೆರೆ ಜಿಲ್ಲೆಯನ್ನು ಸಂಪೂರ್ಣ ತಂಬಾಕು ಮುಕ್ತ ಜಿಲ್ಲೆಯನ್ನಾಗಿಸಿ ಯುವ ಪೀಳಿಗೆಯನ್ನು ತಂಬಾಕು ವ್ಯಸನದಿಂದ ದೂರ ಇಡುವ ನಿಟ್ಟಿನಲ್ಲಿ ಜೂನ್ ತಿಂಗಳಾದ್ಯಂತ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ತಿಳಿಸಿದ್ದಾರೆ.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದಡಿ ಹಮ್ಮಿಕೊಳ್ಳಲಾಗಿದ್ದ ಪ್ರಸಕ್ತ ಸಾಲಿನ ಮೊದಲನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ೧೦ ಹಳ್ಳಿಗಳನ್ನು ತಂಬಾಕು ಮುಕ್ತ ಗ್ರಾಮಗಳೆಂದು ಘೋಷಿಸಲಾಗುವುದು ಎಂದು ಹೇಳಿದ್ದಾರೆ.

"ಆಕರ್ಷಕ ಮುಖವಾಡವನ್ನು ಕಳಚುವುದು, ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ತಡೆಯುವುದು" ಎಂಬ ಪ್ರಸಕ್ತ ಸಾಲಿನ ಧ್ಯೇಯವಾಕ್ಯದೊಂದಿಗೆ ಯುವ ಪೀಳಿಗೆಯನ್ನು ತಂಬಾಕು ಮುಕ್ತಗೊಳಿಸುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ.

___________ ಮುಕ್ತಾಯ __________